**ಅರ್ಜಿಯ ಮೇರೆಗೆ ಸಾಕ್ಷಿಯನ್ನು ದಿಃ *06/03/2026* ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ಆರೋಪಿತರು 4 ಲಕ್ಷ ರೂಪಾಯಿಗಳ ಪೈಕಿ 1 ಲಕ್ಷ ರೂಪಾಯಿಗಳನ್ನು ಮರುಪಾವತಿ ಮಾಡಿದ್ದು, ಸದರಿ 1 ಲಕ್ಷ ರೂಪಾಯಿ ಬಡ್ಡಿಗೆ ಹೊಂದಾಣಿಕೆ ಮಾಡಿದ್ದು ಎಂದು ಹೇಳಿರುವ ವಿಷಯ ಸಂಗತಿ ನನ್ನ ಫಿರ್ಯಾದಿಯಲ್ಲಿ ಅಥವಾ ಪ್ರಮಾಣಪತ್ರದಲ್ಲಿ ಬರೆದಿಲ್ಲ ಎಂದರೆ ನಿಜ. ಸಾಲಗಾರರ ವಿರುದ್ದ ಕಾನೂನುಕ್ರಮ ಕೈಗೊಳುವ ಮುನ್ನ ಸೊಸೈಟಿ ವತಿಯಿಂದ ಬೇಡಿಕೆ ನೋಟೀಸು ಕೊಡಬೇಕಾಗುತ್ತದೆ ಎಂಬ ಪ್ರಶ್ನೆಗೆ ಸಾಕ್ಷಿದಾರರು ಕೊಟ್ಟಿದ್ದೇವೆ ಎಂದು ಉತ್ತರಿಸುತ್ತಾರೆ. ಸದರಿ ನೋಟೀಸು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ಆದ್ದರಿಂದ ನೋಟೀಸು ಕೊಟ್ಟಿಲ್ಲ ಆದರೂ ಸಹ ಕೊಟ್ಟಿದ್ದೇವೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ನಾವು ಮೂರು ನೋಟೀಸುಗಳನ್ನು ಕೊಟ್ಟಿರುತ್ತೇವೆ. ಈ ರೀತಿ ಇರುವ ಮೂರು ನೋಟೀಸುಗಳನ್ನು ಹಾಜರುಪಡಿಸಿಲ್ಲ ಎಂದರೆ ನಿಜ.

***ಮರು ವಿಚಾರಣೆ : ಇಲ್ಲ.***

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ,

1ನೇ ಹೆ ಹಿ ದಿ ನ್ಯಾ ಹಾಗೂ ಸಿಜೆಎಂ,
ಧಾರವಾಡ.